ವೈದ್ಯಕೀಯ ಕಾಲೇಜಿನ ಪ್ರವೇಶ ಪ್ರಕ್ರಿಯೆ

2081 (2693); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)

ಅ) ಬೆಂಗಳೂರಿನ ಕಾರ್ಮಿಕರ ರಾಜ್ಯ ವಿಮಾ ನಿಗಮದ ವೈದ್ಯಕೀಯ ಕಾಲೇಜಿನ ಪ್ರವೇಶ ಪ್ರಕ್ರಿಯೆಗೆ ಅನುಮತಿ ನೀಡಲು ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ (ಎಂ.ಸಿ.ಐ) ನಿರಾಕರಿಸಿರುವುದು ನಿಜವೇ; ಹಾಗಿದ್ದಲ್ಲಿ ನಿರಾಕರಿಸಲು ಕಾರಣವೇನು;

ಆ) ಕಳೆದ ಎರಡು ವರ್ಷಗಳಿಂದ ಈ ವೈದ್ಯಕೀಯ ಕಾಲೇಜಿಗೆ ಮೂಲ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ವೆಚ್ಚ ಮಾಡಿರುವ ಹಣ ಎಷ್ಟು? ಈವರೆವಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದಿರಲು ಕಾರಣವೇನು;

ಇ) 2014–15 ನೇ ಸಾಲಿನ ವೈದ್ಯಕೀಯ ಸೀಟುಗಳ ಪ್ರವೇಶಕ್ಕೆ ತೊಂದರೆಯಾಗಿದೆಯೇ;

ಈ) ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾದ ಅನುಮತಿ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ ದಿನಾಂಕ: 20–12–2013 ಹಾಗೂ 21.12.2013 ರಂದು ಮೊದಲನೆ ಪರಿಶೀಲನೆ ನಡೆಸಿ ಕೆಲವೊಂದು ನ್ಯೂನತೆಗಳನ್ನು ಸರಿಪಡಿಸುವಂತೆ ತಿಳಿಸಿರುತ್ತದೆ. ಅದರಂತೆ ನ್ಯೂನತೆಗಳನ್ನು ಸರಿಪಡಿಸಲಾಗಿದ್ದು ಎಂ.ಸಿ.ಐ ದಿನಾಂಕ:06.06.2014 ರಂದು ಅದರ ಪರಿಶೀಲನೆ ನಡೆಸಿದ್ದು ವರದಿಯನ್ನು ನಿರೀಕ್ಷಿಸಲಾಗಿದೆ

ಆ) ಕಾರ್ಮಿಕರ ರಾಜ್ಯ ವಿಮಾ ನಿಗಮವು ಜೂನ್ 2014 ರವರೆಗೆ 131.62 ಕೋಟಿ ವೆಚ್ಚ ಮಾಡಿರುತ್ತದೆ. ವೈದ್ಯಕೀಯ ಕಾಲೇಜು ಕಾರ್ಮಿಕ ರಾಜ್ಯ ವಿಮಾ ನಿಗಮದ ಮಾದರಿ ಆಸ್ಪತ್ರೆ, ರಾಜಾಜಿನಗರದ

ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಆಸ್ಪತ್ರೆಯ ದೈನಂದಿನ ಕಾರ್ಯಗಳಿಗೆ ತೊಂದರೆಯಾಗದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಾಗಿದ್ದು, ಇದರಿಂದ ವಿಳಂಬ ಉಂಟಾಗಿರುತ್ತದೆ.

ಇ) ಎಂ.ಸಿ.ಐ 2014–15 ನೇ ಸಾಲಿನ ವೈದ್ಯಕೀಯ ಪ್ರವೇಶದ ಪ್ರಕ್ರಿಯೆಯನ್ನು ನಿರಾಕರಿಸಿರುವುದಿಲ್ಲ. ಎಂ.ಸಿ.ಐ ನಿಂದ ವರದಿಯನ್ನು ನಿರೀಕ್ಷಿಸಲಾಗಿದೆ.

ಈ) ಎಂ.ಸಿ.ಐ ಪರಿಶೀಲನೆಯಲ್ಲಿ ಗುರುತಿಸಲಾದ ನ್ಯೂನತೆಗಳನ್ನು ಕಾರ್ಮಿಕರ ರಾಜ್ಯ ವಿಮಾ ನಿಗಮವು ಸರಿಪಡಿಸಿದ್ದು ಎಂ.ಸಿ.ಐ ನಿಂದ ವರದಿಯನ್ನು ನಿರೀಕ್ಷಿಸಲಾಗಿದೆ.

ಕಾಡು ಪ್ರಾಣಿಗಳಿಂದ ರೈತರ ಬೆಳೆ ರಕ್ಷಣೆ

2082 (3421); ಶ್ರೀ ಅರವಿಂದ ಚಂದ್ರಕಾತ ಪಾಟೀಲ್ ಖಾನಾಪುರ)

ಅ) ಖಾನಾಪೂರ ತಾಲ್ಲೂಕು ಅರಣ್ಯ ಆವೃತ್ತವಾದ ಪ್ರದೇಶವಾಗಿದ್ದು, ಇಲ್ಲಿ ಆನೆ, ಕಾಡು ಪ್ರಾಣಿಗಳಿಂದ ರೈತರ ಬೆಳೆ ಪ್ರತಿ ವರ್ಷ ಸಾಕಷ್ಟು ಪ್ರಮಾಣದಲ್ಲಿ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸೋಲಾರ್ ಫೆನ್ಸಿಂಗ್ ಮಾಡುವ ಅವಶ್ಯಕತೆ ಇದ್ದು 100 ಕಿ.ಮೀ. ಸೋಲಾರ್ ಫೆನ್ಸಿಂಗ್ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ.ರಮಾನಾಥ್ ರೈ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ಹೌದು.

ಆ) ಅರಣ್ಯ ಇಲಾಖೆ ಮತ್ತು ಗ್ರಾಮಸ್ಥರ ಸಹಯೋಗದೊಂದಿಗೆ ರೈತನಿಗೆ ಅಥವಾ ರೈತರ ಗುಂಪಿಗೆ ಸಹಾಯಧನ ರೂಪದಲ್ಲಿ ಅಂದರೆ 50:50 ಅನುಪಾತದಲ್ಲಿ ಸೋಲಾರ ತಂತಿಬೇಲಿ ನಿರ್ಮಾಣ ಕುರಿತ ಪ್ರಸ್ತಾವನೆಯು ಸರ್ಕಾರದ ಪರಿಶೀಲನಾ ಹಂತದಲ್ಲಿದೆ.